ಎಸ್.ಎಸ್.ಎಲ್.ಸಿ.ಯಲ್ಲಿ ಶೇಕಡಾ ೩೫ರಿಂದ ೫೦ ಅಂಕಗಳನ್ನು ಪಡೆದಂಕೊಂಡಿರುವವರಿಗೆ ಸರ್ಕಾರದ ಹುದ್ದೆಗಳಲ್ಲಿ ಆದ್ಯತೆ ನೀಡುವುದು

೧೩೫೦. ಶ್ರೀ ಎನ್.ಟಿ. ಬೊಮ್ಮಣ್ಣ (ಕೂಡ್ಲಗಿ).— ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಶೇಕಡಾ ೩೫ರಿಂದ ೫೦ ಅಂಕಗಳಿಗೊಳಗೆ ಪಾಸು ಮಾಡಿದ್ದು, ಅವರಿಗೆ ಯಾವುದೇ ಸರ್ಕಾರಿ ಹುದ್ದೆಗಳು ದೊರೆಯದೇ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ,

ಆ) ಸರ್ಕಾರಿ ಸ್ವಾಮ್ಯದ ಮಂಡಳಿ ಮತ್ತು ನಿಗಮಗಳಲ್ಲಿ ಎಲ್ಲಾ ಅಭ್ಯರ್ಥಿಗಳಿಗೂ ಪರೀಕ್ಷೆ ಮಾಡದೇ ಕೇವಲ ಅಂಕಗಳ ಆಧಾರದ ಮೇಲೆ ಸಂದರ್ಶನಕ್ಕೆ ಕಳುಹಿಸುತ್ತಿರುವುದರಿಂದ ಈ ಎಸ್.ಎಸ್ ಎಲ್.ಸಿ. ಪರೀಕ್ಷೆಯಲ್ಲಿ ೫೦ ಅಂಕಗಳಿಗಿಂತ ಕಡಿಮೆ ಪಡೆದ ನೂರಾರು ಗ್ರಾಮಾಂತರ ಪ್ರದೇಶದ ಯುವಕರಿಗೆ ಯಾವುದೇ ಕೆಲಸಗಳು ದೊರಕಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಕೂಡಲೇ ಎಲ್ಲಾ ಸರ್ಕಾರಿ ಸ್ವಾಮ್ಯದ ಮಂಡಳಿ ಹಾಗೂ ನಿಗಮಗಳಲ್ಲಿ ಶೇಕಡಾ ೫೦ಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ಅಭ್ಯರ್ಥಿಗಳಿಗೆ ನಿರ್ದಿಷ್ಟ ಹುದ್ದೆಗಳನ್ನು ಮೀಸಲಾಗಿಡಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯಮಂತ್ರಿಯವರು).—

ಅ) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇಕಡಾ ೩೫ರಿಂದ ೫೦ ಅಂಕಗಳನ್ನು ಪಡೆದ ಗ್ರಾಮಾಂತರ ಪ್ರದೇಶದ ನಿರುದ್ಯೋಗಿ ಅಭ್ಯರ್ಥಿಗಳ ನಿಖರವಾದ ಸಂಖ್ಯೆ.

ಆ) ಲಭ್ಯವಿಲ್ಲದಿದ್ದರೂ ಕಡಿಮೆ ಅಂಕಗಳನ್ನು ಪಡೆದ ಯಾವುದೇ ಪ್ರದೇಶದ ವಿದ್ಯಾರ್ಥಿಗಳಿಗೆ ಸರ್ಕಾರಿ ಸಂಸ್ಥೆಗಳಲ್ಲಿ ನೇಮಕಾತಿ ದೊರಕುವ ಸಂಭವ

ಇ) ಕಡಿಮೆ ಎಂಬುದನ್ನು ಒಪ್ಪಿಕೊಳ್ಳಬೇಕಾಗುತ್ತದೆ. ಆದಾಗ್ಯೂ ಕಡಿಮೆ ಅಂಕಗಳನ್ನು ಪಡೆದಿರುವುದಕ್ಕಾಗಿ ಉತ್ತೇಜನ ನೀಡುವ ರೀತಿಯಲ್ಲಿ ಅವರಿಗೇ ಹುದ್ದೆಗಳನ್ನು ಕಾಯ್ದಿರಿಸಬೇಕೆಂಬ ಸಲಹೆಯನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ.

ಚುಕ್ಕಿ ಗುರುತಿಲ್ಲದ ಪ್ರಶ್ನೆಗಳಿಗೆ ನೀಡಲಾದ ಉತ್ತರಗಳು

ಕರ್ನಾಟಕ ಮಹಾರಾಷ್ಟ್ರ ಗಡಿ ಸಮಸ್ಯೆ ಬಗ್ಗೆ

೧೩೧೨ ಶ್ರೀ ಮಲ್ಲಣಗೌಡ ಎಸ್. ಪಾಟೀಲ್ (ಸಂಕೇಶ್ವರ).— ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ಮಹಾರಾಷ್ಟ್ರ ಗಡಿ ಸಮಸ್ಯೆಯ ಹಿನ್ನೆಲೆಯಲ್ಲಿ ಎರಡೂ ರಾಜ್ಯದ ಮುಖ್ಯ ಮಂತ್ರಿಗಳು ಹಾಗೂ ಅಧಿಕಾರಿಗಳು ಇದಂಪರೆವಿಗೂ ಎಷ್ಟು ಸಭೆಗಳನ್ನು ನಡೆಸಿರುತ್ತಾರೆ,

ಆ) ಗಡಿ ಭಾಗದಲ್ಲಿ ಈ ಸಮಸ್ಯೆಯಿಂದಾಗಿ ಜನ ಸಾಮಾನ್ಯರಿಗೆ ಆಗುತ್ತಿರುವ ತೊಂದರೆಯನ್ನು ಹೋಗಲಾಡಿಸಲು ಸರ್ಕಾರದವರು ತೆಗೆದುಕೊಂಡಿರುವ ಕ್ರಮವೇನು?

ಇ) ಗಡಿ ಸಮಸ್ಯೆಯ ಹಿನ್ನೆಲೆಯಲ್ಲಿ ಸರ್ಕಾರದವರ ನಿರ್ದಿಷ್ಟವಾದ ನೀಲುವೇನು?

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯಮಂತ್ರಿಯವರು).—

ಅ) ಐದು ಬಾರಿ.

ಆ) ಜನರ ಅನುಕೂಲತೆ ಹಾಗೂ ಅಭಿವೃದ್ಧಿಯ ವಿಚಾರದಲ್ಲಿ ಉಭಯ ರಾಜ್ಯಗಳು ಒಂದೇ ರೀತಿಯ ಕ್ರಮ ತೆಗೆದುಕೊಳ್ಳಬೇಕೆಂಬ ಮತ್ತು ಗಡಿ ಪ್ರದೇಶಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ತೀವ್ರಗೊಳಿಸಬೇಕೆಂಬ ನೀತಿಯನ್ನು ಒಪ್ಪಲಾಗಿದೆ. ಈ ದಿಶೆಯಲ್ಲಿ ಗಡಿ ಪ್ರದೇಶಗಳಿಗೆ ಭೇಟಿ ನೀಡಿ ಅಭಿವೃದ್ಧಿ